## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ನೂತನವಾಗಿ ಸೃಜಿಸಲಾಗಿರುವ ಗ್ರಾಮ ಪಂಚಾಯತಿಗಳಿಗೆ ಅಗತ್ಯವಿರುವ ಪೀಠೋಪಕರಣಗಳು ಮತ್ತು ಕಂಪ್ಯೂಟರ್ ಉಪಕರಣಗಳನ್ನು ಒದಗಿಸುವ ಕುರಿತು – ಆದೇಶ.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 759 ಗ್ರಾಪಂಅ 2014 ಬೆಂಗಳೂರು, ದಿನಾಂಕ 09.01.2015.
2. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 73 ಗ್ರಾಪಂಅ 2015 ಬೆಂಗಳೂರು, ದಿನಾಂಕ 13.02.2015.
3. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 29 ಗ್ರಾಪಂಅ 2014 ಬೆಂಗಳೂರು, ದಿನಾಂಕ 30.04.2015.
4. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 73 ಗ್ರಾಪಂಅ 2015 ಬೆಂಗಳೂರು, ದಿನಾಂಕ 10.08.2015.
5. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 724 ಗ್ರಾಪಂಅ 2015 ಬೆಂಗಳೂರು, ದಿನಾಂಕ 20.10.2015.
6. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 804 ಗ್ರಾಪಂಅ 2015 ಬೆಂಗಳೂರು, ದಿನಾಂಕ 06.04.2016.
7. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 804 ಗ್ರಾಪಂಅ 2015 ಬೆಂಗಳೂರು, ದಿನಾಂಕ 01.07.2016.

**ಪ್ರಸ್ತಾವನೆ:**

ಪ್ರಸ್ತುತ ರಾಜ್ಯದಲ್ಲಿ 6022 ಗ್ರಾಮ ಪಂಚಾಯತಿಗಳು ಅಸ್ತಿತ್ವದಲ್ಲಿವೆ. ಇವುಗಳಲ್ಲಿ ನಂಜಯ್ಯನಮಠ ವರದಿ, ಜನಪ್ರತಿನಿಧಿಗಳ ಮತ್ತು ಸಾರ್ವಜನಿಕರ ಕೋರಿಕೆ ಮೇರೆಗೆ ಮೇಲೆ ಓದಲಾದ ಸರ್ಕಾರದ ಆದೇಶಗಳು (1) ರಿಂದ (7) ರವರೆಗೆ 460 ನೂತನ ಗ್ರಾಮ ಪಂಚಾಯತಿಗಳನ್ನು ನೂತನವಾಗಿ ಸೃಜಿಸಲಾಗಿದೆ. (ವಿವರಗಳನ್ನು ಅನುಬಂಧ 'ಅ' ರಲ್ಲಿ ಲಗತ್ತಿಸಲಾಗಿದೆ)

ಹೊಸದಾಗಿ ರಚಿಸಲಾಗಿರುವ ಗ್ರಾಮ ಪಂಚಾಯತಿಳಿಗೆ ಕಟ್ಟಡ, ಪೀಠೋಪಕರಣಗಳು, ಕಂಪ್ಯೂಟರ್ ಮತ್ತು ಇತರೆ ಸಾಮಗ್ರಿಗಳು, ಗ್ರಾಮ ಪಂಚಾಯತಿ ಸಿಬ್ಬಂದಿ ಹಾಗೂ ಸರ್ಕಾರಿ ನೌಕರರುಗಳ ಸೇವೆಯನ್ನು ಒದಗಿಸುವುದು ಅತ್ಯಾವಶ್ಯಕವಾಗಿದೆ.

2016–17ನೇ ಸಾಲಿನ ಆಯವ್ಯಯದಲ್ಲಿ ರೂ.30.00 ಕೋಟಿಗಳನ್ನು ನಿಗಧಿಗೊಳಿಸಲಾಗಿದೆ. ಈ ಅನುದಾನದಲ್ಲಿ ಪ್ರತಿ ಗ್ರಾಮ ಪಂಚಾಯತಿಗೆ ರೂ. 3.00 ಲಕ್ಷಗಳಂತೆ ಒಟ್ಟು 460 ಗ್ರಾಮ ಪಂಚಾಯತಿಗಳಿಗೆ ರೂ.13.80 ಕೋಟಿಗಳನ್ನು ನೂತನವಾಗಿ ಸೃಜಿಸಲಾಗಿರುವ ಗ್ರಾಮ ಪಂಚಾಯತಿಗಳಿಗೆ ಅಗತ್ಯವಿರುವ ಪೀಠೋಪಕರಣಗಳು ಮತ್ತು ಕಂಪ್ಯೂಟರ್ ಉಪಕರಣಗಳಿಗಾಗಿ ನಿಗಧಿಗೊಳಿಸಲಾಗಿದೆ. ಈ ವಿವರಗಳನ್ನು ಅನುಬಂಧ 'ಬ' ರಲ್ಲಿ ವಿವರಿಸಲಾಗಿದೆ.

ನೂತನವಾಗಿ ಸೃಜಿಸಲಾದ 460 ಗ್ರಾಮ ಪಂಚಾಯತಿಗಳಿಗೆ ಅಗತ್ಯವಿರುವ ಪೀಠೋಪಕರಣಗಳು ಮತ್ತು ಕಂಪ್ಯೂಟರ್ ಉಪಕರಣಗಳನ್ನು ಖರೀದಿಸಲು ಪ್ರತಿ ಗ್ರಾಮ ಪಂಚಾಯತಿಗೆ ರೂ. 3.00 ಲಕ್ಷಗಳಂತೆ ಒಟ್ಟು 460 ಗ್ರಾಮ ಪಂಚಾಯತಿಗಳಿಗೆ ರೂ.13.80 ಕೋಟಿಗಳನ್ನು ಬಿಡುಗಡೆ ಮಾಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/350/ಗ್ರಾಪಂಅ/2015, ಬೆಂಗಳೂರು, ದಿನಾಂಕ: 18.11.2016**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ರಾಜ್ಯದಲ್ಲಿ ನೂತನವಾಗಿ ಸೃಜಿಸಲಾದ 460 ಗ್ರಾಮ ಪಂಚಾಯತಿಗಳಿಗೆ ಅಗತ್ಯವಿರುವ ಪೀಠೋಪಕರಣಗಳು ಮತ್ತು ಕಂಪ್ಯೂಟರ್ ಉಪಕರಣಗಳನ್ನು ಖರೀದಿಸಲು ಪ್ರತಿ ಗ್ರಾಮ ಪಂಚಾಯತಿಗೆ ರೂ. 3.00 ಲಕ್ಷಗಳಂತೆ ಒಟ್ಟು 460 ಗ್ರಾಮ ಪಂಚಾಯತಿಗಳಿಗೆ ರೂ.13.80 ಕೋಟಿಗಳನ್ನು ಬಿಡುಗಡೆ ಮಾಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 267 ವೆಚ್ಚ–6/2016, ಗ್ರಾಅಪ/350/ಗ್ರಾಪಂಅ/2015, ದಿನಾಂಕ: 08.07.2016 ಮತ್ತು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಯೋಇ 44 ಜಿಯೋವಿ 2016, ಗ್ರಾಅಪ/350/ಗ್ರಾಪಂಅ/2015 (ಭಾಗ–2), ದಿನಾಂಕ 25.07.2016 ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

**ಷರತ್ತುಗಳು:**

1. ಅನುಬಂಧ 'ಬ' ರಲ್ಲಿ ಲಗತ್ತಿಸಿರುವ ಪೀಠೋಪಕರಣಗಳ ಸಾಮಗ್ರಿಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ 1999 ಹಾಗೂ ನಿಯಮಗಳು 2000 ವನ್ನು ಕಟ್ಟುನಿಟ್ಟಾಗಿ ಪಾಲಿಸಿ ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳತಕ್ಕದ್ದು.
2. ಬಿಡುಗಡೆ ಮಾಡಲಾದ ಅನುದಾನವನ್ನು ಅನುಬಂಧ 'ಬ' ರಲ್ಲಿ ಲಗತ್ತಿಸಲಾಗಿರುವ ಸಾಮಗ್ರಿಗಳನ್ನು ಖರೀದಿಸಲು ಮಾತ್ರ ಬಳಕೆಮಾಡತಕ್ಕದ್ದು.
3. ಹಣಬಳಕೆ ಪ್ರಮಾಣಪತ್ರಗಳನ್ನು ಆಯಾ ಜಿಲ್ಲಾ ಪಂಚಾಯತಿಗಳಿಗೆ ಸಲ್ಲಿಸತಕ್ಕದ್ದು ಮತ್ತು ಜಿಲ್ಲಾ ಪಂಚಾಯತಿಗಳು ಕ್ರೋಢೀಕೃತ ಹಣಬಳಕೆ ಪ್ರಮಾಣಪತ್ರಗಳನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
4. ಈ ಬಗ್ಗೆ ಆಯಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಉಸ್ತುವಾರಿ ಮಾಡತಕ್ಕದ್ದು.

ಮೇಲೆ ವಿವರಿಸಿರುವಂತೆ ನೂತನವಾಗಿ ಸೃಜಿಸಲಾಗಿರುವ 460 ಗ್ರಾಮ ಪಂಚಾಯತಿಗಳಿಗೆ ಅಗತ್ಯವಿರುವ ಪೀಠೋಪಕರಣಗಳು ಮತ್ತು ಕಂಪ್ಯೂಟರ್ ಉಪಕರಣಗಳನ್ನು ಶೀಘ್ರವಾಗಿ ಖರೀದಿಸಿ, ಗ್ರಾಮ ಪಂಚಾಯತಿಗಳ ಕಛೇರಿಯನ್ನು ಆಡಳಿತಾತ್ಮಕವಾಗಿ ಸುಸಜ್ಜಿತಗೊಳಿಸಿ, ಸಾರ್ವಜನಿಕರಿಗೆ ಸೌಲಭ್ಯಗಳನ್ನು ಒದಗಿಸುವಲ್ಲಿ ಗ್ರಾಮ ಪಂಚಾಯತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.
3. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
5. ನಿರ್ದೇಶಕರು, ಗ್ರಾಮೀಣ ಮೂಲಸೌಕರ್ಯ-2,ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. 460 ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ಅಧ್ಯಕ್ಷರುಗಳು, ಕಾರ್ಯ ನಿರ್ವಾಹಕ ಅಧಿಕಾರಿಗಳ ಮೂಲಕ.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ,
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ. ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ರವರ ಆಪ್ತ ಕಾರ್ಯದರ್ಶಿ.
3. ಕಛೇರಿ/ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತಕ್ಕೆ.